ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

# ಗೋವಿಂದನ ಪಾದ ಸೇರಿದ ಆಚಾರ್ಯ

## ಡಾ.ಬನ್ನಂಜೆ ಗೋವಿಂದಾಚಾರ್ಯ ನಿಧನ

**ಉಡುಪಿ:** ನಾಡಿನ ಹಿರಿಯ ವಿದ್ವಾಂಸ ಹಾಗೂ ಪದ್ಮಶ್ರೀ ಪುರಸ್ಕೃತರಾದ ಡಾ.ಬನ್ನಂಜೆ ಗೋವಿಂದಾಚಾರ್ಯ (84) ಭಾನುವಾರ ಬೆಳಗ್ಗೆ 11.15ಕ್ಕೆ ಅಂಬಲಪಾಡಿಯಲ್ಲಿರುವ ಸ್ವಗೃಹದಲ್ಲಿ ನಿಧನರಾದರು.

ಮೃತರಿಗೆ ನಾಲ್ವರು ಪುತ್ರಿಯರು, ಇಬ್ಬರು ಪುತ್ರರು ಇದ್ದಾರೆ. 12 ದಿನಗಳ ಹಿಂದಷ್ಟೆ ಗೋವಿಂದಾಚಾರ್ಯರ ಪುತ್ರ- ವಿಜಯಭೂಷಣ ಆಚಾರ್ಯ ಅವರು ನಿಧನರಾಗಿದ್ದರು. ಡಾ.ಬನ್ನಂಜೆ ಗೋವಿಂದಾಚಾರ್ಯ ಅವರ ಅಂತ್ಯಕ್ರಿಯೆ ಭಾನುವಾರ ಸಂಜೆ ಸಕಲ ಸರಕಾರಿ ಗೌರವಗಳೊಂದಿಗೆ ಮನೆಯ ಆವರಣದಲ್ಲಿ ನೆರವೇರಿತು. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ನಾಡಿನ ಗಣ್ಯರು ಸಂತಾಪ ಸೂಚಿಸಿದ್ದಾರೆ.

**26,000 ಗಂಟೆಗೂ ಹೆಚ್ಚು ಉಪನ್ಯಾಸ:** ಪಡುಮನ್ನೂರು ನಾರಾಯಣ ಆಚಾರ್ಯರ ಪುತ್ರರಾದ ಬನ್ನಂಜೆ ಗೋವಿಂದಾಚಾರ್ಯರು ಪ್ರಾಚೀನ ಜ್ಞಾನಶಾಖೆಗಳಾದ ವೇದ, ಉಪನಿಷತ್ತು, ಪುರಾಣ, ರಾಮಾಯಣ, ಮಹಾಭಾರತದ ಕುರಿತು ದೇಶ, ವಿದೇಶಗಳಲ್ಲಿ ಇಲ್ಲಿಯವರೆಗೂ 26,000 ಗಂಟೆಗೂ ಹೆಚ್ಚು ಕಾಲ ಉಪನ್ಯಾಸ ಹಾಗೂ ಪ್ರವಚನ ನೀಡಿದ್ದಾರೆ.

**ಕೃಷ್ಣ ಮಠದ ಆಸ್ಥಾನ ವಿದ್ವಾನ್:** ಕೃಷ್ಣ ಮಠ, ಅಷ್ಟಮಠಗಳು ಸೇರಿದಂತೆ ನಾಡಿನ ಪ್ರಸಿದ್ಧ ಮಠ ಹಾಗೂ ಸಂಸ್ಥಾನಗಳಿಂದ ವಿದ್ಯಾ ವಾಚಸ್ಪತಿ, ವಿದ್ಯಾ ರತ್ನಾಕರ, ಪಂಡಿತ ರತ್ನ, ಸಂಶೋಧನಾ ವಿಚಕ್ಷಣ ಪಂಡಿತಾಚಾರ್ಯ ಬಿರುದುಗಳನ್ನು ಅವರಿಗೆ ಪ್ರದಾನ ಮಾಡಲಾಗಿದೆ. ಉಡುಪಿಯ ಕೃಷ್ಣ ಮಠದ ಆಸ್ಥಾನ ವಿದ್ವಾನ್ ಆಗಿದ್ದರು.

**ಅಗಾಧ ಸಂಶೋಧನೆ:** ಸಂಸ್ಕೃತದಲ್ಲಿ 30ಕ್ಕೂ ಅಧಿಕ ಗ್ರಂಥಗಳು ಹಾಗೂ ಕನ್ನಡದಲ್ಲಿ 130ಕ್ಕೂ ಅಧಿಕ ಕೃತಿಗಳನ್ನು ರಚಿಸಿದ್ದಾರೆ. 45 ಗ್ರಂಥಗಳು ಪ್ರಕಾಶನಕ್ಕೆ ಬಾಕಿ ಇವೆ. ವೇದ, ಉಪನಿಷತ್ತು, ಬ್ರಹ್ಮಸೂತ್ರ, ಮಹಾಭಾರತ, ರಾಮಾಯಣ, ಪುರಾಣಗಳ ಬಗ್ಗೆ ಅಗಾಧ ಸಂಶೋಧನೆ ನಡೆಸಿದ್ದಾರೆ. ಅಮೆರಿಕ, ಆಸ್ಟ್ರೇಲಿಯಾ, ಯುರೋಪ್, ಇಂಡೋನೇಷ್ಯಾ, ರಷ್ಯಾ, ನೆದರ್ಲೆಂಡ್, ಸ್ವಿಟ್ಜರ್ಲೆಂಡ್, ಗ್ರೀಸ್ ಸೇರಿದಂತೆ ಹಲವು ದೇಶಗಳ ವಿದ್ಯಾರ್ಥಿಗಳು ಗೋವಿಂದಾಚಾರ್ಯ ಅವರ ಬಳಿ ಸಂಶೋಧನಾ ಅಧ್ಯಯನ ನಡೆಸಿದ್ದಾರೆ.

### ಪರಿಚಯ

**ಹೆಸರು:** ಡಾ.ಬನ್ನಂಜೆ ಗೋವಿಂದಾಚಾರ್ಯ
**ತಂದೆ:** ದಿವಂಗತ ಪಡುಮನ್ನೂರು ನಾರಾಯಣ ಆಚಾರ್ಯ
**ಊರು:** ಉಡುಪಿ ತಾಲೂಕಿನ ಅಂಬಲಪಾಡಿ
**ಸೇವಾ ಕ್ಷೇತ್ರ:** ಪತ್ರಕರ್ತ, ಸಾಹಿತಿ, ಸಂಶೋಧಕ, ಕವಿ, ಅನುವಾದಕ, ಉಪನ್ಯಾಸಕ, ಪ್ರವಚನ ವಿದ್ವಾಂಸ

### ರಾಜ್ಯ ಮಟ್ಟದ ಪ್ರಶಸ್ತಿಗಳು

- ಉಡುಪಿ ಶ್ರೀ ಕೃಷ್ಣ ಮಠ ಅಷ್ಟಮಠಗಳು ಸೇರಿದಂತೆ ಅನೇಕ ಪ್ರಸಿದ್ಧ ಮಠ ಸಂಸ್ಥಾನಗಳಿಂದ ವಿದ್ಯಾ ವಾಚಸ್ಪತಿ, ವಿದ್ಯಾರತ್ನಾಕರ, ಪಂಡಿತರತ್ನ, ಸಂಶೋಧನಾ ವಿಚಕ್ಷಣ ಪಂಡಿತಾಚಾರ್ಯ ಇತ್ಯಾದಿ ಬಿರುದು ಪ್ರದಾನ.
- ಉಡುಪಿ ಶ್ರೀ ಕೃಷ್ಣ ಮಠದ ಆಸ್ಥಾನ ವಿದ್ವಾನ್
- ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ (1974ರಲ್ಲಿ)
- ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ
- ಆಳ್ವಾಸ್ ನುಡಿಸಿರಿ ಪ್ರಶಸ್ತಿ
- ಉಡುಪಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷತೆ
- ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕವಿಗೋಷ್ಠಿಯ ಅಧ್ಯಕ್ಷತೆ
- ಮಂಗಳೂರು ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್

### ರಾಷ್ಟ್ರೀಯ ಪ್ರಶಸ್ತಿಗಳು

- ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ
- ಭಾರತ ಸರಕಾರದ ಪ್ರತಿಷ್ಠಿತ ಪದ್ಮಶ್ರೀ ಪ್ರಶಸ್ತಿ

### ಅಂತಾರಾಷ್ಟ್ರೀಯ ಮಾನ್ಯತೆ

- 2008ರಲ್ಲಿ ಅಮೆರಿಕದಲ್ಲಿ (ಪ್ರಿನ್ಸ್‌ಟನ್) ನಡೆದ ವಿಶ್ವ ಶಾಂತಿ ಸಮ್ಮೇಳನಕ್ಕೆ ವಿಶೇಷ ಆಹ್ವಾನಿತರಾಗಿ ಭಾಗಿ

### ಸರಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ

ಡಾ.ಬನ್ನಂಜೆ ಗೋವಿಂದಾಚಾರ್ಯ ಅವರಿಗೆ ಸರಕಾರಿ ಗೌರವದೊಂದಿಗೆ ಸಂಜೆ 5.30ಕ್ಕೆ ಬನ್ನಂಜೆಯಲ್ಲಿನ ಅವರ ಮನೆಯ ಆವರಣದಲ್ಲಿ ಅಂತ್ಯಕ್ರಿಯೆ ನಡೆಸಲಾಯಿತು. ಜಿಲ್ಲಾಧಿಕಾರಿ ಜಿ.ಜಗದೀಶ, ಶಾಸಕ ರಘುಪತಿ ಭಟ್, ಸಚಿವ ಕೋಟ ಶ್ರೀನಿವಾಸ ಪೂಜಾರಿ ಮೊದಲಾದವರು ಅಂತಿಮ ದರ್ಶನ ಪಡೆದರು.